**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ಯತೀಂದ್ರ ಎಸ್ ಇವರು ನಿಯಮ 72ರ ಮೇರೆಗೆ ಕೋರಿರುವ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಹೇಳಿಕೆ.**

**ಸೂಚನೆ**

ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು 2ಎ ಸಮುದಾಯಗಳಿಗೆ ಸೇರಿದವರಿಗೆ ಸಿವಿಲ್ ಗುತ್ತಿಗೆ ಕಾಮಗಾರಿಗಳಲ್ಲಿ ರೂ.1.00 ಕೋಟಿಯವರೆಗೆ ಮೀಸಲಾತಿ ತಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಸೂಚನೆಯನ್ನು ಹೊರಡಿಸಿದ್ದು, ಕಂದಾಯ ಇಲಾಖೆಯಿಂದ ಪ್ರತ್ಯೇಕ ಜಾತಿ ಪ್ರಮಾಣ ಪತ್ರ ನೀಡಬೇಕಾಗಿದೆ. ಇದರ ಬಗ್ಗೆ ಸೂಕ್ತ ಕ್ರಮ ವಹಿಸುವ ವಿಷಯದ ಕುರಿತು.

**ಹೇಳಿಕೆ:**

ಹಿಂದುಳಿದ ವರ್ಗಗಳ ಪ್ರವರ್ಗ-1 ಮತ್ತು ಪ್ರವರ್ಗ-2ಎ ಸಮುದಾಯಗಳಿಗೆ ಸೇರಿರುವ ಸಿವಿಲ್ ಗುತ್ತಿಗೆದಾರರಿಗೆ ಸರ್ಕಾರದ ಕಾಮಗಾರಿಗಳಲ್ಲಿ ರೂ.1.00 ಕೋಟಿವರೆಗೆ ಮೀಸಲಾತಿ ಹಾಗೂ ಉದ್ಯಮಿಗಳಿಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ರೂ.10.00 ಕೋಟಿಗಳ ವರೆಗಿನ ಸಾಲಕ್ಕೆ ಶೇ.6 ರಂತೆ ಬಡ್ಡಿದರದಲ್ಲಿ ಸಹಾಯಧನ ಯೋಜನೆ ಪಡೆಯಲು ನಮೂನೆ-ಐ ನಲ್ಲಿ ಜಾತಿ ಪ್ರಮಾಣ ಪತ್ರವನ್ನು ವಿತರಿಸಲು ಅಟಲ್ ಜೀ ಜನಸ್ನೇಹಿ ನಿರ್ದೇಶನಾಲಯದ ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಿಕೊಡಲು ರಾಷ್ಟ್ರೀಯ ಮಾಹಿತಿ ಕೇಂದ್ರ (NIC)ರವರಿಗೆ ಕೋರಲಾಗಿದ್ದು, ತಂತ್ರಾಂಶದಲ್ಲಿ ಅಳವಡಿಸುವ ಕಾರ್ಯವು ಪ್ರಗತಿಯಲ್ಲಿರುತ್ತದೆ.

**ಸಂಖ್ಯೆ:ಕಂಇ 96 ಎಜೆಎಸ್ 2025**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು